ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಆಸ್ತಿ ತೆರಿಗೆ ಪಾವತಿಸದಿರುವ ಕುರಿತು

ಶ್ರೀ ಲಹರ್ ಸಿಂಗ್ ಸಿರೋಯಾ(ವಿಧಾನಸಭೆಯಿಂದ ಚುನಾಯಿತರಾದವರು) -

481 (627) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2015-2016 ರಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಎಂಟು ವಲಯಗಳಲ್ಲಿರುವ ಸರ್ಕಾರಿ ಕಛೇರಿಗಳೂ ಸೇರಿದಂತೆ ಅನೇಕ ಪ್ರತಿಷ್ಠಿತ ಖಾಸಗಿ ಸಂಸ್ಥೆಗಳು ಬೆಂಗಳೂರು ಮಹಾನಗರ ಪಾಲಿಕೆಗೆ ಆಸ್ತಿ ತೆರಿಗೆಯನ್ನು ಪಾವತಿಸದೆ ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಅವಧಿಯಲ್ಲಿ ಪ್ರತಿಷ್ಠಿತ ಖಾಸಗಿ ಸಂಸ್ಥೆಗಳಿಂದ ಪಾಲಿಕೆಗೆ ಬರಬೇಕಾಗಿರುವ ಬಾಕಿ ಆಸ್ತಿ ತೆರಿಗೆಯ ಮೊತ್ತವೆಷ್ಟು; (ವಿವರವನ್ನು ಒದಗಿಸುವುದು)

(ಇ) ಪ್ರತಿಷ್ಠಿತ ಖಾಸಗಿ ಸಂಸ್ಥೆಗಳಿಂದ ಬಾಕಿ ಇರುವ ಆಸ್ತಿ ತೆರಿಗೆಯ ಮೊತ್ತವನ್ನು ವಸೂಲಿ ಮಾಡಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ? (ಪೂರ್ಣ ವಿವರವನ್ನು ಒದಗಿಸುವುದು)